Akashvani : Bangalore

Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

15.09.2026 / 14.30 hrs

<><*<><>*><>

ಮುಖ್ಯಾಂಶಗಳು

- ಮುಂದಿನ ವರ್ಷ ಸರ್ಕಾರದ ವತಿಯಿಂದ ಎಂಜಿನಿಯರ್‌ಗಳ ದಿನ ಆಚರಣೆ; ಮುಖ್ಯಮಂತ್ರಿ ಘೋಷಣೆ
- ದುಬೈನ ಅರೇಬಿಯನ್ ಟ್ರಾವೆಲ್ ಮಾರ್ಕೆಟ್‌ನಲ್ಲಿ ರಾಜ್ಯದ ಪ್ರವಾಸೋದ್ಯಮ ಮಳಿಗೆ ಉದ್ಘಾಟಿಸಿದ ಸಚಿವ ಕೆ.ಜೆ.ಜಾರ್ಜ್
- ಪ್ರಧಾನಿ ನರೇಂದ್ರ ಮೋದಿ ಆಡಳಿತದಲ್ಲಿ ಭಾರತ ವಿಶ್ವದಲ್ಲೇ ನಿರ್ಣಾಯಕ ಶಕ್ತಿಯಾಗಿ ಪರಿವರ್ತನೆ - ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಅಭಿಮತ
- ಕಲಬುರಗಿಯಲ್ಲಿ ಕಲ್ಯಾಣ ಕರ್ನಾಕ ಉತ್ಸವ ೨೦೨೬; ಸಾರ್ವಜನಿಕರು ಭಾಗವಹಿಸುವಂತೆ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಕರೆ
- ಚಾಮರಾಜನಗರದ ಬಡಗಲಪುರದಲ್ಲಿ ಹುಲಿ ದಾಳಿಗೆ ರೈತ ಸಾವು- ವ್ಯಾಘ್ರ ಸೆರೆಗೆ ಸಚಿವ ಸಿ.ಪುಟ್ಟರಂಗಶೆಟ್ಟಿ ಸೂಚನೆ

<><*<><>*><>

ಮುಂದಿನ ವರ್ಷದಿಂದ ಸರ್ಕಾರದ ವತಿಯಿಂದ ಎಂಜಿನಿಯರ್‌ಗಳ ದಿನ ಆಚರಿಸಲಾಗುವುದು ಎಂದು ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸರ್.ಎಂ.ವಿಶ್ವೇಶ್ವರಯ್ಯ ಪ್ರತಿಮೆಗೆ ಮಾಲಾರ್ಪಣೆ ಮಾಡಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಿಶ್ವೇಶ್ವರಯ್ಯ ದೇಶಕ್ಕೆ ಮಾದರಿಯಾಗಿದ್ದು, ಕರ್ನಾಟಕಕ್ಕೂ ಅವರ ಕೊಡುಗೆ ಅಪಾರ ಎಂದು ಹೇಳಿದ್ದಾರೆ. ಇದೇ ವೇಳೆ, ಬಿಜೆಪಿ ನಾಯಕರ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ ಅವರು, ಬರಗಾಲದ ವಿಚಾರದಲ್ಲಿ ರಾಜಕೀಯ ಮಾಡಿದರೆ ಅರ್ಥವಿಲ್ಲ ಎಂದು ತಿಳಿಸಿದ್ದಾರೆ. ರಾಜ್ಯದಲ್ಲಿ ವಿದ್ಯುತ್ ಸಮಸ್ಯೆ ಹೆಚ್ಚಾಗಿದೆ. ಈ ಹಿನ್ನೆಲೆಯಲ್ಲಿ ಜನರನ್ನು ಮಾನಸಿಕವಾಗಿ ಸಿದ್ಧಪಡಿಸಿ, ಕುಡಿಯುವ ನೀರಿನ ಪೂರೈಕೆಗೆ ತಯಾರಿ ಮಾಡಿಕೊಳ್ಳಲಾಗುತ್ತಿದೆ. ಇದಕ್ಕಾಗಿ ವಿಶೇಷ ಅಧಿವೇಶನ ಕರೆಯಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಬಿಜೆಪಿ ನಾಯಕರು ಜನರನ್ನು ಪ್ರಚೋದನೆ ಮಾಡುವ ಕೆಲಸ ಮಾಡುತ್ತಿದ್ದು, ರಾಜ್ಯಕ್ಕೆ ಕೆಟ್ಟ ಹೆಸರು ತರುವ ಕೆಲಸ ಮಾಡಬೇಡಿ ಎಂದು ಮನವಿ ಮಾಡಿದ್ದಾರೆ.

<><*<><>*><>

ದುಬೈನಲ್ಲಿ ನಡೆಯುತ್ತಿರುವ 'ಅರೇಬಿಯನ್ ಟ್ರಾವೆಲ್ ಮಾರ್ಕೆಟ್'ನಲ್ಲಿ ರಾಜ್ಯ ತನ್ನ ವೈವಿಧ್ಯಮಯ ಪ್ರವಾಸೋದ್ಯಮ ಆಕರ್ಷಣೆಗಳನ್ನು ಪ್ರದರ್ಶಿಸುತ್ತಿದೆ. ಇಂಧನ ಮತ್ತು ಪ್ರವಾಸೋದ್ಯಮ ಸಚಿವ ಕೆ.ಜೆ.ಜಾರ್ಜ್ ಕರ್ನಾಟಕ ಪ್ರವಾಸೋದ್ಯಮ ಮಳಿಗೆ ಉದ್ಘಾಟಿಸಿದರು. ಯುಎಇ ಮೂಲದ ಪ್ರವಾಸೋದ್ಯಮ ಕಂಪನಿಗಳೊಂದಿಗೆ ದುಂಡುಮೇಜಿನ ಸಂವಾದ ನಡೆಸಿ, ಕರ್ನಾಟಕ ಪ್ರವಾಸೋದ್ಯಮವನ್ನು ಉತ್ತೇಜಿಸುವ ಮಾರ್ಗಗಳ ಕುರಿತು ಚರ್ಚಿಸಿದರು. ಮಳಿಗೆಯಲ್ಲಿ ರಾಜ್ಯದ ಪರಂಪರೆ, ಸಂಸ್ಕೃತಿ, ಭೂದೃಶ್ಯಗಳು ಹಾಗೂ ಪ್ರವಾಸೋದ್ಯಮ ಅನುಭವಗಳನ್ನು ಪ್ರದರ್ಶಿಸಲಾಯಿತು. ಮೈಸೂರು, ಹಂಪಿ, ಬಾದಾಮಿ, ಬೇಲೂರು, ಹಳೇಬೀಡು, ಪಟ್ಟದಕಲ್ಲು, ಕರಾವಳಿ ಹಾಗೂ ಪಶ್ಚಿಮ ಘಟ್ಟಗಳ ಪ್ರವಾಸಿ ತಾಣಗಳ ಬಗ್ಗೆ ಸಚಿವರು ಬೆಳಕು ಚೆಲ್ಲಿದ್ದಾರೆ. ಎಟಿಎಂ ದುಬೈ ಮೂಲಕ ಕರ್ನಾಟಕವನ್ನು ಜಾಗತಿಕ ಪ್ರವಾಸೋದ್ಯಮ ಸಮುದಾಯಕ್ಕೆ ಪರಿಚಯಿಸಿ, ಹೆಚ್ಚಿನ ಅಂತಾರಾಷ್ಟ್ರೀಯ ಪ್ರವಾಸಿಗರನ್ನು ಆಕರ್ಷಿಸುವ ಗುರಿ ಹೊಂದಲಾಗಿದೆ ಎಂದು ತಿಳಿಸಿದ್ದಾರೆ. ಅಂತಾರಾಷ್ಟ್ರೀಯ ಪ್ರವಾಸೋದ್ಯಮ ಕ್ಷೇತ್ರದ ಪ್ರಮುಖ ವಾರ್ಷಿಕ ವ್ಯಾಪಾರ ಮೇಳವಾದ ಇದು ಜಾಗತಿಕ ಪ್ರವಾಸೋದ್ಯಮ ವೃತ್ತಿಪರರಿಗೆ ವ್ಯಾಪಾರ ವೇದಿಕೆಯಾಗಿದೆ.

<><*<><>*><>

ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಕಳೆದ ೧೧ ವರ್ಷಗಳಲ್ಲಿ ಭಾರತ ನಿರ್ಣಾಯಕ ಆಡಳಿತ, ವೇಗದ ಆರ್ಥಿಕ ಬೆಳವಣಿಗೆ ಹಾಗೂ ತಂತ್ರಜ್ಞಾನ ಕ್ಷೇತ್ರದಲ್ಲಿ ಮಹತ್ವದ ಪರಿವರ್ತನೆ ಕಂಡಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದ್ದಾರೆ. ಧಾರವಾಡದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಧಾನಿಯವರ ೨೫ ವರ್ಷಗಳ ಸಾರ್ವಜನಿಕ ಸೇವೆ ಹಾಗೂ ಆಡಳಿತವನ್ನು ಸ್ಮರಿಸಿ, ಇದೇ ೧೭ರಿಂದ ಅಕ್ಟೋಬರ್ ೧೭ರವರೆಗೆ ದೇಶಾದ್ಯಂತ 'ಸೇವಾ ಸಂಕಲ್ಪ ಅಭಿಯಾನ' ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದ್ದಾರೆ. 'ಜನಸೇವೆಯೇ ಪ್ರಭು ಸೇವೆ' ಎಂಬ ಧ್ಯೇಯದೊಂದಿಗೆ ಬಿಜೆಪಿ, ಎನ್‌ಡಿಎ ಮಿತ್ರಪಕ್ಷಗಳು ಹಾಗೂ ವಿವಿಧ ಸ್ವಯಂಸೇವಾ ಸಂಘಟನೆಗಳು ಅಭಿಯಾನದಲ್ಲಿ ಪಾಲ್ಗೊಳ್ಳಲಿವೆ ಎಂದು ಮಾಹಿತಿ ನೀಡಿದ್ದಾರೆ.

<><*<><>*><>

ವಿಧಾನಸೌಧದಲ್ಲಿಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನ ಉದ್ಘಾಟಿಸಿದರು. ಇದೇ ವೇಳೆ ಡಾ.ಬಿ.ಆರ್.ಅಂಬೇಡ್ಕರ್ ಹಾಗೂ ಬಾಬು ಜಗಜೀವನರಾಂ ಅವರ ಭಾವಚಿತ್ರಗಳಿಗೆ ಪುಷ್ಪ ನಮನ ಸಲ್ಲಿಸಿದರು. ಬಳಿಕ ಸಭಿಕರ ಜತೆ ಸಂವಿಧಾನ ಪೀಠಿಕೆ ಓದಿ, ಯುವ ಸಂಸತ್ ಸಭೆ ಕಾರ್ಯಕ್ರಮದ ಲೋಗೋ ಅನಾವರಣಗೊಳಿಸಿದರು. ಕಾರ್ಯಕ್ರಮದಲ್ಲಿ ಉಪಮುಖ್ಯಮಂತ್ರಿ ಡಾ.ಜಿಪರಮೇಶ್ವರ್, ಸಚಿವರಾದ ಕೆ.ಎಚ್.ಮುನಿಯಪ್ಪ,

ಶಿವರಾಜ್ ತಂಗಡಗಿ, ರಿಜ್ವಾನ್ ಅರ್ಷದ್, ಮಾಜಿ ಸಚಿವ ಎಚ್.ಸಿ.ಮಹದೇವಪ್ಪ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

<><*<><>*><>

ಕಲ್ಯಾಣ ಕರ್ನಾಟಕ ಉತ್ಸವ-೨೦೨೪ರ ಅಂಗವಾಗಿ ನಾಳೆ ಮತ್ತು ನಾಡಿದ್ದು, ಕಲಬುರಗಿ ನಗರದಲ್ಲಿ ವೈವಿಧ್ಯಮಯ ಸಾಂಸ್ಕೃತಿಕ, ಸಂಗೀತ, ನೃತ್ಯ ಹಾಗೂ ಮನರಂಜನಾ ಕಾರ್ಯಕ್ರಮ ಆಯೋಜಿಸಲಾಗಿದೆ. ಸಾರ್ವಜನಿಕರು, ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಉತ್ಸವವನ್ನು ಯಶಸ್ವಿಗೊಳಿಸಬೇಕೆಂದು ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಕರೆ ನೀಡಿದ್ದಾರೆ. ಕಲ್ಯಾಣ ಕರ್ನಾಟಕದ ಇತಿಹಾಸ, ಕಲೆ, ಸಂಸ್ಕೃತಿ, ಪರಂಪರೆ ಹಾಗೂ ಸ್ಥಳೀಯ ಪ್ರತಿಭೆಗಳನ್ನು ಜನರೊಂದಿಗೆ ಸಂಭ್ರಮಿಸುವ ಉದ್ದೇಶದಿಂದ ಕಲಬುರಗಿ ನಗರದ ವಿವಿಧ ವೇದಿಕೆಗಳಲ್ಲಿ ಎರಡು ದಿನಗಳ ಕಾಲ ಹಲವು ವಿಶೇಷ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಅಪ್ಪನ ಕೆರೆಯಲ್ಲಿ ಸಂಜೆ ೭ ಗಂಟೆಯಿಂದ ರಾತ್ರಿ ೯.೩೦ ಗಂಟೆ ವರೆಗೆ ಪ್ರತಿ ೩೦ ನಿಮಿಷಕ್ಕೊಮ್ಮೆ ಧ್ವನಿ ಬೆಳಕು ಕಾರ್ಯಕ್ರಮ ನಡೆಯಲಿದೆ.

<><*<><>*><>

ಚಾಮರಾಜನಗರ ತಾಲೂಕಿನ ಬಡಗಲಪುರ ಗ್ರಾಮದ ಜಮೀನಿನಲ್ಲಿ ಹುಲಿ ದಾಳಿಗೆ ರೈತ ಬಸವಣ್ಣ ಸಾವನ್ನಪ್ಪಿದ್ದಾರೆ. ಸಚಿವ ಸಿ.ಪುಟ್ಟರಂಗಶೆಟ್ಟಿ ಇಂದು ಅವರ ಕುಟುಂಬವನ್ನು ಭೇಟಿಯಾಗಿ ಸಾಂತ್ವಾನ ಹೇಳಿದರು. ಸರ್ಕಾರದಿಂದ ೫ ಲಕ್ಷ ರೂಪಾಯಿ ಪರಿಹಾರ ವಿತರಿಸಿ, ಉಳಿದ ೧೫ ಲಕ್ಷ ಪರಿಹಾರವನ್ನು ಶೀಘ್ರವೇ ನೀಡಲಾಗುವುದು ಎಂದು ತಿಳಿಸಿದ್ದಾರೆ. ಮೃತನ ಕುಟುಂಬಕ್ಕೆ ಮಾಸಿಕ ೪ ಸಾವಿರ ಹಣದ ಜೊತೆಗೆ ಡಿ.ಗ್ರೂಪ್ ಉದ್ಯೋಗ ನೀಡುವ ಭರವಸೆ ನೀಡಿದ್ದಾರೆ. ಬಳಿಕ, ಬಿಆರ್‌ಟಿ ಹುಲಿ ಸಂರಕ್ಷಿತ ಪ್ರದೇಶದ ಅರಣ್ಯಾಧಿಕಾರಿಗಳಿಗೆ ನರಹಂತಕ ಹುಲಿಯನ್ನು ಕೂಡಲೇ ಸೆರೆ ಹಿಡಿಯುವಂತೆ ಸೂಚಿಸಿದ್ದಾರೆ. ಕಾಡಂಚಿನ ಗ್ರಾಮಗಳಲ್ಲಿ ಎಷ್ಟು ಹುಲಿಗಳಿವೆ ಎಂಬುದನ್ನು ಗುರುತಿಸಿ, ಆದಷ್ಟು ಬೇಗ ಅರವಳಿಕೆ ಚುಚ್ಚುಮದ್ದು ನೀಡಿ ಹುಲಿ ಸೆರೆ ಹಿಡಿಯುವಂತೆ ನಿರ್ದೇಶನ ನೀಡಿದ್ದಾರೆ ಈಗಾಗಲೇ ಆಯಕಟ್ಟಿನ ಸ್ಥಳದಲ್ಲಿ ಅರಣ್ಯ ಇಲಾಖೆ ಕೊಟ್ಟಿಗೆ ಮಾದರಿ ಬೋನಿಟ್ಟು ಕಾರ್ಯಾಚರಣೆ ನಡೆಸುತ್ತಿದ್ದು, ಡ್ರೋಣ್ ಕ್ಯಾಮೆರಾ ಮೂಲಕವೂ ಹುಲಿ ಪತ್ತೆಗೆ ಕ್ರಮ ವಹಿಸಲಾಗಿದೆ.

<><*<><>*><>

ಮೀನುಗಾರಿಕೆ ಹಾಗೂ ಬಂದರು ಸಚಿವ ಕೆ.ಎಸ್. ಬಸವಂತಪ್ಪ ಇಂದು ಕಾರವಾರ ವಾಣಿಜ್ಯ ಬಂದರಿಗೆ ಭೇಟಿ ನೀಡಿ, ಬಂದರು ಅಭಿವೃದ್ಧಿ ಹಾಗೂ ಸಾಗರಮಾಲಾ ಯೋಜನೆಯಡಿ ಕೈಗೊಳ್ಳಲಾಗುತ್ತಿರುವ ಕಾಮಗಾರಿಗಳ ಕುರಿತು ಪರಿಶೀಲನೆ ನಡೆಸಿದರು. ಸಾಗರಮಾಲಾ

ಯೋಜನೆಯಡಿ ಕಾರವಾರ ಬಂದರು ವಿಸ್ತರಣೆ ಸೇರಿದಂತೆ ವಿವಿಧ ಅಭಿವೃದ್ಧಿ ಯೋಜನೆಗಳ ಕುರಿತು ಸಚಿವರು ಅಧಿಕಾರಿಗಳಿಂದ ಮಾಹಿತಿ ಪಡೆದರು. ಈ ಸಂದರ್ಭದಲ್ಲಿ ಶಾಸಕ ಸತೀಶ ಸೈಲ್, ಬಂದರಿನ ಪ್ರಸ್ತುತ ಸ್ಥಿತಿ, ಅಭಿವೃದ್ಧಿ ಯೋಜನೆಗಳು ಹಾಗೂ ಸ್ಥಳೀಯ ಮೀನುಗಾರರ ಸಮಸ್ಯೆಗಳ ಕುರಿತು ಸಚಿವರಿಗೆ ಮಾಹಿತಿ ನೀಡಿದರು. ಸಾಗರಮಾಲಾ ಯೋಜನೆಯಡಿ ಬಂದರು ವಿಸ್ತರಣೆ ಕಾಮಗಾರಿಗಳಿಂದ ಸ್ಥಳೀಯ ಮೀನುಗಾರರಿಗೆ ಯಾವುದೇ ರೀತಿಯ ತೊಂದರೆ ಉಂಟಾಗದಂತೆ ಕ್ರಮ ಕೈಗೊಳ್ಳಬೇಕು ಎಂದು ಸಚಿವರು ಬಂದರು ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು. ಈ ಸಂದರ್ಭದಲ್ಲಿ ಶಾಸಕ ಸತೀಶ ಸೈಲ್, ಜಿಲ್ಲಾಧಿಕಾರಿ ಕೆ.ಲಕ್ಷ್ಮಿಪ್ರಿಯಾ ಸೇರಿದಂತೆ ಬಂದರು ಇಲಾಖೆ ಅಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.

<><*<><>*><>

ಹಾವೇರಿ ಜಿಲ್ಲೆಯಲ್ಲಿ ೨ ಸಾವಿರ ೩೧೫ ಸಾರ್ವಜನಿಕ ಗಣಪತಿ ಮೂರ್ತಿ ಪ್ರತಿಷ್ಠಾಪಿಸಲಾಗಿದೆ. ಮೂರ್ತಿ ವಿಸರ್ಜನೆ ಮೆರವಣಿಗೆ ಸಮಯದಲ್ಲಿ ಯಾವುದೇ ಅಹಿತಕರ ಘಟನೆಗಳಿಗೆ ಅವಕಾಶ ಇಲ್ಲದಂತೆ ವ್ಯಾಪಕ ಪೊಲೀಸ್ ಬಂದೋಬಸ್ತ್ ಮಾಡಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಯಶೋಧಾ ವಂಟಗೋಡಿ ತಿಳಿಸಿದ್ದಾರೆ. ಜಿಲ್ಲೆಯಲ್ಲಿ ೨೧ ಅತಿಸೂಕ್ಷ್ಮ, ೩೫೦ ಸೂಕ್ಷ್ಮ ಹಾಗೂ ೧ ಸಾವಿರದ ೯೩೪ ಸಾಧಾರಣ ಪ್ರದೇಶಗಳೆಂದು ಗುರುತಿಸಲಾಗಿದ್ದು, ಸೂಕ್ಷ್ಮ ಪ್ರದೇಶಗಳಲ್ಲಿ ಸಿಸಿ ಕ್ಯಾಮೆರಾ, ವಾಚ್ ಟವರ್, ಪಿಎ ವ್ಯವಸ್ಥೆ ಹಾಗೂ ಲೈಟಿಂಗ್ ವ್ಯವಸ್ಥೆ ಅಳವಡಿಸಲು ಕ್ರಮ ಕೈಗೊಳ್ಳಲಾಗಿದೆ.  ಬೆಂಗಳೂರಿನ ಜಿಬಿಎ ಐದು ನಗರ ಪಾಲಿಕೆಗಳಲ್ಲಿ ನಿನ್ನೆ ಒಟ್ಟು ೧ ಲಕ್ಷದ ೮೪ ಸಾವಿರ ಗಣೇಶ ಮೂರ್ತಿಗಳನ್ನು ವಿಸರ್ಜನೆ ಮಾಡಲಾಗಿದೆ. ಕೇಂದ್ರ ನಗರ ಪಾಲಿಕೆಯಲ್ಲಿ ೨೮ ಸಾವಿರದ ೮೬೦, ಪೂರ್ವ ನಗರ ಪಾಲಿಕೆಯಲ್ಲಿ ೮ ಸಾವಿರ ೪೬೦, ಉತ್ತರ ನಗರ ಪಾಲಿಕೆಯಲ್ಲಿ ೧೬ ಸಾವಿರದ ೧೬ ಸಾವಿರ ೮೫೭, ದಕ್ಷಿಣ ನಗರ ಪಾಲಿಕೆಯಲ್ಲಿ ೧೦ ಸಾವಿರದ ೩೭೨, ಪಶ್ಚಿಮ ನಗರ ಪಾಲಿಕೆಯಲ್ಲಿ ವ್ಯಾಪ್ತಿಯಲ್ಲಿ ೧ ಲಕ್ಷದ ೨೦ ಸಾವಿರಕ್ಕೂ ಅಧಿಕ ಗಣೇಶ ಮೂರ್ತಿಗಳನ್ನು ವಿಸರ್ಜನೆ ಮಾಡಲಾಗಿದೆ.

<><*<><>*><>

ವಿಶ್ವ ವಿಖ್ಯಾತ ಮೈಸೂರು ದಸರಾ ಮಹೋತ್ಸವಕ್ಕೆ ದಿನಗಣನೆ ಆರಂಭವಾಗಿದೆ. ಎರಡನೇ ಹಂತದಲ್ಲಿ ಸಾಂಸ್ಕೃತಿಕ ನಗರಿಗೆ ಆಗಮಿಸಿರುವ ೩  ದಸರಾ ಆನೆಗಳ ತೂಕ ಪರೀಕ್ಷೆಯನ್ನು ಇಂದು ತೂಕ ಮಾಪನ ಕೇಂದ್ರದಲ್ಲಿ ಯಶಸ್ವಿಯಾಗಿ ನಡೆಸಲಾಯಿತು. ಈ ಬಾರಿಯ ತೂಕ ಪರೀಕ್ಷೆಯಲ್ಲಿ ಗಜಪಡೆಯ ಹೊಸ ಸದಸ್ಯ 'ಸುಗ್ರೀವ' ಆನೆ ಎಲ್ಲರ ಗಮನ ಸೆಳೆದಿದ್ದು, ತೂಕದಲ್ಲಿ ಅಗ್ರಸ್ಥಾನ ಗಿಟ್ಟಿಸಿಕೊಂಡಿದ್ದಾನೆ. ಸುಗ್ರೀವ ಆನೆ ಬರೋಬ್ಬರಿ ೫ ಸಾವಿರದ ೮೫೦ ಕೆಜಿ ತೂಗುವ ಮೂಲಕ ದಸರಾ ಆನೆಗಳ ಪೈಕಿ ಅತ್ಯಂತ ಭಾರವಾದ ಆನೆ ಎಂಬ ಹೆಗ್ಗಳಿಕೆಗೆ ಪಾತ್ರನಾಗಿದ್ದಾನೆ.

ಚೈತ್ರ ೨ ಸಾವಿರದ ೧೯೫ ಕೆಜಿ, ರೂಪಾ ೨ ಸಾವಿರದ ೧೬೦ ಕೆಜಿ ತೂಕವಿದೆ. ಮೊದಲನೇ ತಂಡದಲ್ಲಿ ಬಂದಿರುವ ’ಶ್ರೀಕಂಠ’ ಆನೆಯು ೫ ಸಾವಿರದ ೭೯೦ ಕೆಜಿ ತೂಕ ಹೊಂದಿತ್ತು. ಇದೀಗ ಎರಡನೇ ಹಂತದಲ್ಲಿ ಆಗಮಿಸಿದ ಸುಗ್ರೀವ, ಶ್ರೀಕಂಠನಿಗಿಂತ ೬೦ ಕೆಜಿ ಹೆಚ್ಚಿರುವ ಮೂಲಕ ಶ್ರೀಕಂಠ ಆನೆಯನ್ನೇ ಹಿಂದಿಕ್ಕಿ ಪ್ರಥಮ ಸ್ಥಾನವನ್ನು ತನ್ನದಾಗಿಸಿಕೊಂಡಿದೆ. ಆನೆಗಳ ಆರೋಗ್ಯ, ಬಲ ಹಾಗೂ ಜಂಬೂಸವಾರಿಯಲ್ಲಿ ಅಂಬಾರಿ ಹೊರುವ ಸಾಮರ್ಥ್ಯವನ್ನು ಅಳೆಯಲು ಈ ತೂಕ ಪರೀಕ್ಷೆ ಅತ್ಯಂತ ಪ್ರಮುಖವಾಗಿದೆ. ಎಲ್ಲಾ ಆನೆಗಳು ಸಂಪೂರ್ಣ ಆರೋಗ್ಯದಿಂದ ಕೂಡಿವೆ ಎಂದು ಅರಣ್ಯ ಇಲಾಖೆಯ ಅಧಿಕಾರಿಗಳು ತಿಳಿಸಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**